# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರಾದ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ) ರವರ ಅಪ್ಪಣೆ ಮೇರೆಗೆ ದಿನಾಂಕ:21/06/2022ರ ಮಂಗಳವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು ವಾರ್ಡ್–145.
3. ಕೆಲಸ ಪರಿವೀಕ್ಷಕರು ವಾರ್ಡ್–145.
4. ಕಿರಿಯ ಇಂಜಿನಿಯರ್ (ವಿದ್ಯುತ್ ವಿಭಾಗ ಬಿಬಿಎಂಪಿ).
5. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.
6. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
7. ಸಹಾಯಕ ಇಂಜಿನಿಯರ್ (ಬೆಸ್ಕಾಂ).
8. ಅರಣ್ಯ ಇಲಾಖೆಯ ಅಧಿಕಾರಿಗಳು.
9. ಸಹಾಯಕ ಇಂಜಿನಿಯರ್ (BWSSB).
10. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಸಂಚಾರ ವಾರ್ಡ್ 145.
11. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
2. ತೋಟಗಾರಿಕೆ ಇಲಾಖೆ, ಮೇಲ್ವಿಚಾರಕರು ವಾರ್ಡ್ 145.
3. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
4. ಸ.ಕಾ.ನಿ. ಅಭಿಯಂತರರು, ಯೋಜನೆ–ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ.

*********

1. ವಾರ್ಡ್ ವ್ಯಾಪ್ತಿಯ 5ನೇ ಅಡ್ಡರಸ್ತೆ ವಿಲ್ಸನ್‌ಗಾರ್ಡನ್ ಜಂಕ್ಷನ್‌ನಲ್ಲಿ ರಸ್ತೆ ಹುಬ್ಬು ಹಾಕಲು 5ನೇ ಅಡ್ಡರಸ್ತೆಯ ನಿವಾಸಿಗಳು ಕೋರಿದರು. ಸದರಿ ಜಂಕ್ಷನ್ ರಸ್ತೆ ಹುಬ್ಬುಗಳನ್ನು ಹಾಕಲು ಟ್ರಾಫಿಕ್ ಪೋಲೀಸ್‌ಗೆ ಪತ್ರ ಬರೆಯಲು ಅಧ್ಯಕ್ಷರು ಸೂಚಿಸಿದರು.

2. ವಾರ್ಡ್ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ಪ್ರದೇಶದಲ್ಲಿ ರಸ್ತೆಯ ಎರಡು ಬದಿಯಲ್ಲಿ ನಾಲ್ಕು ಚಕ್ರದ ವಾಹನಗಳನ್ನು ಪಾರ್ಕಿಂಗ್ ಮಾಡಿದ್ದು, ಸ್ಥಳೀಯರ ವಾಹನಗಳ ಸಂಚಾರಕ್ಕೆ ತೊಂದರೆಯಾಗಿದ್ದು, ಹಾಗೂ ರಸ್ತೆಗಳ ಫುಟ್‌ಪಾತ್ ಮೇಲೆ ವಾಹನಗಳ ಪಾರ್ಕಿಂಗ್ ಮಾಡಿದ್ದು, ಸೂಕ್ತ ಕಾನೂನು ಕ್ರಮಕ್ಕಾಗಿ ಕೋರಿದರು–ಟ್ರಾಫಿಕ್ ಪೋಲೀಸ್ ವಿಭಾಗ ರವರು ಮಾತನಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯ ಬಿ.ಟಿ.ಎಸ್ ಮುಖ್ಯರಸ್ತೆಯಲ್ಲಿ ಫುಟ್‌ಪಾತ್‌ಗಳ ಮೇಲೆ ಸಂಜೆ ವೇಳೆಯಲ್ಲಿ ಮೀನು ಮಾಂಸ ಬೇಯಿಸುತ್ತಿರುವುದರಿಂದ ಸ್ಥಳೀಯರು ಹಾಗೂ ಪಾದಚಾರಿಗಳಿಗೆ ತೊಂದರೆಯಾಗಿದ್ದು, ರಾಣಿ ವೈನ್ಸ್ ಮುಂಭಾಗದಲ್ಲಿ ಸಂಜೆ ವೇಳೆ ಮೀನು ಬೇಯಿಸುತ್ತಿದ್ದು ಇದರಿಂದ ಸ್ಥಳೀಯರಿಗೆ ಮುಜುಗರ ಉಂಟಾಗುತ್ತಿರುವುದರಿಂದ ಕ್ರಮ ಕೈಗೊಳ್ಳಲು ಸಭೆಯಲ್ಲಿ ಸಾರ್ವಜನಿಕರು ಕೋರಿದರು. ಸದರಿ ವಿಷಯದ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

4. ವಾರ್ಡಿನ ವ್ಯಾಪ್ತಿಯ 11ನೇ ಮುಖ್ಯರಸ್ತೆ, 16ನೇ ಅಡ್ಡರಸ್ತೆಯಲ್ಲಿರುವ ಮಿಲ್ಕಿ ಮಿಸ್ಟ್ ಹತ್ತಿರ ವಾಹನಗಳ ಪಾರ್ಕಿಂಗ್ ಮಾಡುತ್ತಿದ್ದು, ರಸ್ತೆ ಸಂಚಾರ ಹಾಗೂ ಪಾದಚಾರಿಗಳಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಅನೇಕ ಬಾರಿ ಸಭೆಯಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ. ಹಾಗೂ ಉಳಿಕೆ ಅನುಪಯುಕ್ತ ವಸ್ತುಗಳನ್ನು ಫುಟ್‌ಪಾತ್ ಮೇಲೆ ಹಾಕಲಾಗುತ್ತಿದೆ ಎಂದು ದೂರಿದರು–ಅಧ್ಯಕ್ಷರು ಮಾತನಾಡಿ ಸದರಿ ವಿಷಯದ ಬಗ್ಗೆ ಟ್ರಾಫಿಕ್ ಪೋಲೀಸ್ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಕೈಗೊಳ್ಳಲು ಸಭೆಯಲ್ಲಿ ಸೂಚಿಸಿದರು,

5. ವಾರ್ಡಿನ ವ್ಯಾಪ್ತಿಯ 13ನೇ "ಎ" ಅಡ್ಡರಸ್ತೆಯಲ್ಲಿ UGD Line ಚಿಕ್ಕದಾಗಿದ್ದು ಚೇಂಜ್ ಮಾಡಲು ಕೊರಿದರು–ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.

6. ವಾರ್ಡಿನ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ಪ್ರದೇಶದ ಅನೇಕ ಬೀದಿಗಳ ಮನೆಗಳಿಗೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ನೀರು ಸರಬರಾಜು ಸರಿಯಾಗಿ ಆಗುತ್ತಿಲ್ಲವೆಂದು ಇದರಿಂದ ಅನೇಕ ಮನೆಗಳಲ್ಲಿ ಮೋಟರ್ ಅಳವಡಿಸಿ ನೀರನ್ನು ಎಳೆಯುತ್ತಿದ್ದು, ಉಳಿದ ಮನೆಗಳಿಗೆ ನೀರು ಸರಬರಾಜು ಆಗದೆ ತೊಂದರೆ ಆಗುತ್ತಿದೆ ಎಂದು ಸಭೆಯಲ್ಲಿ ದೂರಿದರು. ಅಧ್ಯಕ್ಷರು ಮಾತನಾಡಿ ಕ್ರಮ ಕೈಗೊಳ್ಳಲು BWSSB ಅಭಿಯಂತರರಿಗೆ ಸೂಚಿಸಿದರು.

7. ಘನತ್ಯಾಜ್ಯ ಕಸ ವಿಲೇವಾರಿ ಆಟೋಗಳಲ್ಲಿ Announcement mike ಹಾಕದೆ ಇದ್ದು ಹಾಗೂ ಪೌರಕಾರ್ಮಿಕರಿಗೆ ಗೋಣಿ ಬ್ಯಾಗ್/ಚಾಪೆಗಳನ್ನು ಸರಬರಾಜು ಮಾಡದೇ ತೊಂದರೆ ಆಗುತ್ತಿರುತ್ತದೆ ಎಂದು ಸಭೆಯಲ್ಲಿ ಕೋರಿದರು-ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಅಧ್ಯಕ್ಷರು ಸೂಚಿಸಿದರು.

8. ವಾರ್ಡ್ ವ್ಯಾಪ್ತಿಯಲ್ಲಿನ ಅನಧಿಕೃತ ಹೂವಿನ ಅಂಗಡಿಗಳಿಗೆ ವಾಣಿಜ್ಯ ತೆರಿಗೆ ವಿಧಿಸುವ ಬಗ್ಗೆ ಚರ್ಚಿಸಲಾಯಿತು-ಸಂಬಂಧಿಸಿದಂತೆ ದಂಡ ವಿಧಿಸಲು ಕಂದಾಯ ವಿಭಾಗದ ಅಧಿಕಾರಿಗಳಿಗೆ ಅಧ್ಯಕ್ಷಕರು ಸೂಚಿಸಿದರು.

9. ನಾರಾಯಣಪುರದ ಅಯ್ಯಪ್ಪ ಸ್ವಾಮಿ ದೇವಸ್ಥಾನದ ರಸ್ತೆಯಲ್ಲಿ ಸರಿಯಾಗಿ ಘನತ್ಯಾಜ್ಯ ಪಡೆಯುತ್ತಿಲ್ಲವೆಂದು ಹಾಗೂ ಆಟೋಗಳಲ್ಲಿ ಮೈಕ್ ಇಲ್ಲದೇ ಸರಿಯಾದ ಸಮಯಕ್ಕೆ ಬರುತ್ತಿಲ್ಲವೆಂದು ಸಾರ್ವಜನಿಕರು ದೂರಿದರು-ಸದರಿ ವಿಷಯದ ಬಗ್ಗೆ ಅಧ್ಯಕ್ಷರು ಮಾತನಾಡಿ ನಿಗಧಿತ ಸಮಯದಲ್ಲಿ ಘನತ್ಯಾಜ್ಯ ಸಂಗ್ರಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ